**<u>ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ ಸೇಡಂ</u>**

**CC No.589/2024**

**(ಇಂದು ದಿಃ 07-07-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು)**

| ಹೆಸರು ಶ್ರೀ/ಶ್ರೀಮತಿ | ರಾಜು | CW-9 | PW-4 |
|---|---|---|---|
| ತಂದೆ/ಗಂಡನ ಹೆಸರು | ಪಿರುನಾಯಕ | | |
| ವಯಸ್ಸು | 37 ವರ್ಷ | | |
| ಉದ್ಯೋಗ | ವ್ಯವಸಾಯ | | |
| ವಾಸ ಸ್ಥಳ | ಜಾಕನಪಲ್ಲಿ | | |

**<u>ಮುಖ್ಯ ವಿಚಾರಣೆಃ- ಸಹಾಯಕ ಸರ್ಕಾರಿ ಅಭೀಯೋಜಕರಿಂದಃ-</u>**

ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಪಂಚನಾಮೆಯನ್ನು ನಿಪಿ-2 ಎಂದು,ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ದಿನಾಂಕಃ 23-05-2021ರಂದು ಪೋಲಿಸರು ನಮ್ಮ ತಾಂಡಾದಲ್ಲಿ ಘಟನಾ ಸ್ಥಳಕ್ಕೆ ಬಂದು ಬೆಳಿಗ್ಗೆ 9 ರಿಂದ 10-30ರವರೆಗೆ ನನ್ನ ಸಮಕ್ಷಮ ಪಂಚನಾಮೆ ಕ್ರಮ ಜರುಗಿಸಿ ಒಂದು ಕಟ್ಟಿಗೆಯನ್ನು ವಶಪಡಿಸಿಕೊಂಡರು. ಸಾಕ್ಷಿ ಸದರಿ ಕಟ್ಟಿಗೆಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೆ ಮು. ಮಾ. 1 ಎಂದು ಗುರುತಿಸಲಾಗಿದೆ.

**ಮುಂದುವರೆದ ಮುಖ್ಯ ವಿಚಾರಣೆ ಇಲ್ಲ.**

**<u>ಪಾಟೀ ಸವಾಲುಃ- ಆರೋಪಿ ಪರ ಶ್ರೀ. ಜಿ ಪಿ ಆರ್ ವಕೀಲರಿಂದಃ-</u>**

ಆರೋಪಿಗಳು ಮತ್ತು ಚಾಸಾ-1 ಮತ್ತು 2ರ ನಡುವೆ ಯಾವ ಕಾರಣಕ್ಕೆ ಗಲಾಟೆಯಾಗಿತ್ತು ನನಗೆ ಗೊತ್ತಿಲ್ಲ, ಗಲಾಟೆಯಾದಾಗ ನಾನು ಇರಲಿಲ್ಲ. ದಿನಾಂಕಃ23-05-2021ರಂದು ಪೋಲಿಸರು ನಮ್ಮ ತಾಂಡಾದಲ್ಲಿ ಘಟನಾ ಸ್ಥಳಕ್ಕೆ ಬಂದು ಬೆಳಿಗ್ಗೆ 9 ರಿಂದ 10-30ರವರೆಗೆ ನನ್ನ ಸಮಕ್ಷಮ ಪಂಚನಾಮೆ ಕ್ರಮ ಜರುಗಿಸಿ ಒಂದು ಕಟ್ಟಿಗೆಯನ್ನು ವಶಪಡಿಸಿಕೊಂಡರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳ್ಚು ಮಾಡಿಸಲಾಯಿತು)

**ಓ.ಹೇ.ಕೇ. ಸರಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ, ಸೇಡಂ.**